## ಸಿವಿಲ್ ಮತ್ತು ಪ್ರಥಮ ದರ್ಜೆಯ ನ್ಯಾಯಿಕ ದಂಡಾಧಿಕಾರಿಯವರ ನ್ಯಾಯಾಲಯ, ಹಗರಿಬೊಮ್ಮನಹಳ್ಳಿ

ಸಿ ಸಿ ನಂ.1035/2017

ಸಾಕ್ಷಿಗೆ ದಿನಾಂಕ 03-01-2026 ರಂದು ಪ್ರಮಾಣ ವಚನ ಭೋದಿಸಲಾಯಿತು.

C.W.: 3 P.W.: 3

| | | |
|---|---|---|
| ಹೆಸರು | : | ಕೆ ದೊಡ್ಡಬಸಪ್ಪ |
| ತಂದೆಯ ಹೆಸರು | : | ದುರುಗಪ್ಪ |
| ವಯಸ್ಸು | : | 55 ವರ್ಷ |
| ಉದ್ಯೋಗ | : | ವ್ಯವಸಾಯ |
| ವಾಸ ಸ್ಥಳ | : | ಏಣಗಿ ಬಸಾಪುರ ಗ್ರಾಮ |

ಮುಖ್ಯ ವಿಚಾರಣೆ ಸಹಾಯಕ ಸರ್ಕಾರಿ ಅಭಿಯೋಜಕರವರಿಂದಃ-

ದಿಃ21-03-2017 ರಂದು ನಾನು ನಮ್ಮ ಊರಿನಲ್ಲಿ ನಮ್ಮ ಊರಿನಿಂದ ನಮ್ಮ ಜಮೀನಿಗೆ ಹೋಗುತ್ತಿದ್ದೆ. ಆಗ ಸಮಯ ಬೆಳಿಗ್ಗೆ 8 ಗಂಟೆಯಾಗಿತ್ತು. ಆರೋಪಿತರು ಮತ್ತು ಚಾಸಾ-1 ರವರು ಜಗಳ ಮಾಡಿರುತ್ತಾರಂತಾ ಪೋಲೀಸರು ನನಗೆ ತಿಳಿಸಿದರು. 1ನೇ ಆರೋಪತನ ಮನೆಯ ಮುಂದೆ ನನಗೆ ಪಂಚನಾಮೆಗೆ ಸಹಿ ಮಾಡಲು ಹೇಳಿದರು ಅದರಂತೆ ನಾನು ಪಂಚಾನಾಮೆಗೆ ಸಹಿ ಮಾಡಿರುತ್ತೇನೆ. ಅದನ್ನು ನೋಡಿದರೆ ಗುರುತಿಸುತ್ತೇನೆ ಸಾಕ್ಷಿಯು ಪಂಚನಾಮೆಯನ್ನು ನೋಡಿ ಗುರುತಿಸಿದ್ದು ಅದನ್ನು ಈಗಾಗಲೇ ನಿಪಿ-2 ಎಂದು ಗುರುತಿಸಲಾಗಿದ್ದು ಅದರ ಮೇಲಿರುವ ಸಾಕ್ಷಿಯ ಸಹಿಯನ್ನು ನಿಪಿ-2ಬಿ ಎಂದು ಗುರುತಿಸಲಾಯಿತು. ಪಂಚನಾಮೆಯಲ್ಲಿ ಏನು ಬರೆದಿರುತ್ತಾರೆಂದು ನನಗೆ ಗೊತ್ತಿಲ್ಲ. ನನ್ನ ಸಮಕ್ಷಮ ಪೋಲೀಸರು ಯಾವುದೇ ಮು ಮಾಲುಗಳನ್ನು ಅಮಾನತ್ತುಪಡಿಸಿಕೊಂಡಿಲ್ಲ. ನಿಪಿ-3 ದಾಖಲೆಯನ್ನು ಸಾಕ್ಷಿಗೆ ತೋರಿಸಲಾಗಿ ಸಾಕ್ಷಿಯು ಅದರಲ್ಲಿ ತನ್ನ ಸಹಿ ಇದೆ ಅಂತಾ ನೋಡಿ ಗುರುತಿಸಿದ್ದು ಅದನ್ನು ನಿಪಿ-3ಬಿ ಎಂದು ಗುರುತಿಸಲಾಯಿತು. ಸದರಿ ದಾಖಲೆಯಲ್ಲಿ ಏನು ಬರೆದಿರುತ್ತಾರೆಂದು ನನಗೆ ಗೊತ್ತಿಲ್ಲ. ಸದರಿ ದಾಖಲೆಗೂ ಸಹಾ ನಾನು 1ನೇ ಆರೋಪಿತನ ಮನೆಯ ಮುಂದೆ ಸಹಿ ಮಾಡಿರುತ್ತೇನೆ. ಸಾಕ್ಷಿಯು ನಿಪಿ-4 ನ್ನು ನೋಡಿ ಗುರುತಿಸಿರುತ್ತಾರೆ. ಪಂಚನಾಮೆ, ನಕಾಶೆ ಮತ್ತು ಪೋಟೋ ಮಾಡಿಕೊಳ್ಳಲು ಆ ದಿನ ಬೆಳಿಗ್ಗೆ 9 ರಿಂದ 10 ಗಂಟೆಯಾಯಿತು. ನನ್ನ ಜೊತೆ ಆ ದಿನ ಚಾಸಾ-2 ರವರು ಸಹಾ ಸಹಿ ಮಾಡಿರುತ್ತಾರೆ. ಅವರು ಮರಣ ಹೊಂದಿರುತ್ತಾರೆ.

(ಸಹಾಯಕ ಸರ್ಕಾರಿ ಅಭಿಯೋಜಕರವರು ಸಾಕ್ಷಿಯನ್ನು ಭಾಗಶಃ ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀಸವಾಲಿಗೆ ಅನುಮತಿ ನೀಡಲು ಕೇಳಿಕೊಂಡಿದ್ದು ಅನುಮತಿ ನೀಡಲಾಯಿತು.)

ಪಾಟೀ ಸವಾಲುಃ ಸ. ಸ. ಅಭಿಯೋಜಕರವರಿಂದಃ-

ಪಂಚನಾಮೆ ಕಾಲಕ್ಕೆ ಚಾಸಾ-1 ರವರು ಹಾಜರಿದ್ದರು ಎಂದರೆ ಸರಿ. ಘಟನಾ ಸ್ಥಳದಲ್ಲಿ ಚಾಸಾ-1 ರವರು ಪೋಲೀಸರಿಗೆ ಘಟನಾ ಸ್ಥಳವನ್ನು ತೋರಿಸಿದರು ಆಗ ಪೋಲೀಸರು

ಪಂಚನಾಮೆ ಜರುಗಿಸಿರುತ್ತಾರೆಂದರೆ ಸರಿಯಲ್ಲ ಸಾಕ್ಷಿ ಮುಂದುವರೆದು ಎಲ್ಲಾ ಮುಗಿದ ನಂತರ ಹೋಗಿರುತ್ತೇನೆ ಎನ್ನುತ್ತಾರೆ. ಚಾಸಾ-1 ರವರು ಪೋಲೀಸರಿಗೆ ಮು ಮಾ-1 ನ್ನು ನೀಡಿರುತ್ತಾರೆಂದರೆ ಸುಳ್ಳು. ಚಾಸಾ-1 ರವರು ಘಟನೆಯ ವಿವರವನ್ನು ಪಂಚನಾಮೆಯ ಕಾಲಕ್ಕೆ ಘಟನೆಯ ವಿವರ ಮತ್ತು ಘಟನಾ ಸ್ಥಳದ ಬಗ್ಗೆ ಚಕ್ಕುಬಂದಿಯೊಂದಿಗೆ ಹೇಳಿದ್ದು ಅದನ್ನು ಪೋಲೀಸರು ಪಂಚನಾಮೆಯಲ್ಲಿ ಬರೆದುಕೊಂಡಿರುತ್ತಾರೆಂದರೆ ಸರಿಯಲ್ಲ. ಪಂಚನಾಮೆಯ ವಿಚಾರ ನನಗೆ ಸಂಪೂರ್ಣವಾಗಿ ಗೊತ್ತಿದೆ ಪಂಚನಾಮೆ, ನಕಾಶೆ ಮತ್ತು ಪೋಟೋ ವಿಚಾರ ಸಂಪೂರ್ಣವಾಗಿ ತಿಳಿದುಕೊಂಡು ನಾನು ಪಂಚನಾಮೆಗೆ ಮತ್ತು ನಕಾಶೆಗೆ ಸಹಿ ಮಾಡಿರುತ್ತೇನೆಂದರೆ ಸರಿಯಲ್ಲ. ಪಂಚನಾಮೆಯನ್ನು ಪೋಲೀಸರು ಬೆಳಿಗ್ಗೆ 7 ರಿಂದ 8 ಗಂಟೆಯವರೆಗೆ ಮಾಡಿರುತ್ತಾರೆಂದರೆ ಸರಿಯಲ್ಲ. ಪಂಚನಾಮೆ ಮಾಡಿ ನಿಪಿ-4 ರಂತೆ ಪೋಟೋ ತೆಗೆದುಕೊಂಡಿರುತ್ತಾರೆಂದರೆ ಸರಿಯಲ್ಲ.

ಪಾಟೀ ಸವಾಲು. ಆರೋಪಿತರ ಪರ ಶ್ರೀ ಟಿ ಎಂ ವಕೀಲರಿಂದಃ-

ನನಗೆ ಸ್ವಲ್ಪ ಮತ್ತು ಸ್ವಲ್ಪ ಓದಲು ಬರೆಯಲು ಬರುತ್ತದೆ. ಪೋಲೀಸರು ಬರೆದ ಪಂಚನಾಮೆಗೆ ನಾನು ಅವರ ಕೋರಿಕೆಯಂತೆ ಸಹಿ ಮಾಡಿರುತ್ತೇನೆ. ಅದರಲ್ಲಿ ಏನು ಬರೆದಿರುತ್ತಾರೆನ್ನುವ ವಿಚಾರ ನನಗೆ ಗೊತ್ತಿಲ್ಲ. ಯಾವ ಕಾರಣಕ್ಕಾಗಿ ಪೋಲೀಸರು ನನ್ನ ಸಹಿ ಪಡೆದರೆಂದು ನನಗೆ ಗೊತ್ತಿಲ್ಲ. ಪೋಲೀಸರು ನಿಪಿ-4 ರಂತೆ ಪೋಟೋವನ್ನು ತೆಗೆದುಕೊಂಡಿದ್ದಾರೆ ಅದನ್ನು ಯಾವ ಉದ್ದೇಶಕ್ಕಾಗಿ ತೆಗೆದುಕೊಂಡಿರುತ್ತಾರೆಂದು ನನಗೆ ಗೊತ್ತಿಲ್ಲ. ಪೋಲೀಸರು ನಕಾಶೆಯನ್ನು ಯಾವ ಕಾರಣಕ್ಕೆ ತೆಗೆದರೆಂದು ನನಗೆ ಗೊತ್ತಿಲ್ಲ, ಅವರ ಕೋರಿಕೆಯಂತೆ ನಾನು ನಕಾಶೆಗೆ ಸಹಿ ಮಾಡಿರುತ್ತೇನೆ.

ಮರು ವಿಚಾರಣೆ ಇಲ್ಲಃ

(ಮುಕ್ತ ನ್ಯಾಯಾಲಯದಲ್ಲಿ ನನ್ನ ಹೇಳಿಕೆಯಂತೆ ಬೆರಳಚ್ಚು ಮಾಡಲಾಯಿತು.)

ಓ ಹೇ ಕೇ ಸರಿ ಇದೆ,

ಸಿವಿಲ್ ಮತ್ತು ಜೆ ಎಂ ಎಫ್ ಸಿ.,
ಹಗರಿಬೊಮ್ಮನಹಳ್ಳಿ